ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತಿನ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE: 24/1/2020

# ಪರಿಸ್ಥಿತಿ ನಿಯಂತ್ರಣಕ್ಕೆ ಗೋಲಿಬಾರ್ ನಡೆದಿದೆ: ಗೃಹ ಸಚಿವ ಬೊಮ್ಮಾಯಿ

**ವಿಧಾನ ಪರಿಷತ್:** ಸಿಎಎ ವಿರೋಧಿಸಿ ಡಿ.19 ರಂದು ಮಂಗಳೂರಿನಲ್ಲಿ ನಡೆದ ಪ್ರತಿಭಟನೆಯ ವೇಳೆ ಉದ್ರಿಕ್ತರಿಂದ ಪೊಲೀಸ್ ಠಾಣೆಯತ್ತ ಪೆಟ್ರೋಲ್‌ಬಾಂಬ್, ಕಲ್ಲು ತೂರಾಟ ಹಾಗೂ ಪೊಲೀಸ್ ಠಾಣೆಗೆ ನುಗ್ಗಲು ಪ್ರಯತ್ನಿಸಿದಾಗ ಅನಿವಾರ್ಯವಾಗಿ ಗೋಲಿಬಾರ್ ನಡೆಸಬೇಕಾಯಿತು ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಸಮರ್ಥಿಸಿಕೊಂಡರು.

ಗುರುವಾರ ವಿಧಾನಪರಿಷತ್‌ನಲ್ಲಿ ಮಂಗಳೂರು ಗೋಲಿಬಾರ್ ಪ್ರಕರಣದ ಕುರಿತು ಉತ್ತರಿಸಿದ ಅವರು, ಪ್ರತಿಭಟನಾಕಾರರು ಗನ್‌ಶಾಪ್‌ಗೆ ನುಗ್ಗಿ ಗನ್ ಹಾಗೂ ಗುಂಡುಗಳನ್ನು ಪಡೆದುಕೊಳ್ಳಲು ಮುಂದಾದರು. ಇಂತಹ ಸಮಯದಲ್ಲಿ ಪೊಲೀಸರು ಪ್ರತಿಭಟನಾಕಾರರನ್ನು ಚದುರಿಸಲು ಲಾಠಿ ಚಾರ್ಜ್, ಅಶ್ರುವಾಯು, ಗಾಳಿಯಲ್ಲಿ ಗುಂಡು ಹಾರಿಸಿದರು. ಆದರೂ ಪರಿಸ್ಥಿತಿ ನಿಯಂತ್ರಣಕ್ಕೆ ಬರದ ಕಾರಣ ಗೋಲಿಬಾರ್ ಮಾಡಬೇಕಾಯಿತು ಎಂದು ತಿಳಿಸಿದರು.

**ಮಂಗಳೂರು ಗಲಭೆ ಪೂರ್ವನಿಯೋಜಿತ:** ಡಿ.19ರಂದು ಸಿಎಎ ವಿರುದ್ಧ ಪ್ರತಿಭಟನೆಗೆ ಎಸ್‌ಕೆಎಸ್ಸೆಸ್ಸೆಫ್ ಕರೆ ನೀಡಿತ್ತು. ಆದರೆ, ಆ ದಿನ ರಾಜ್ಯಾದ್ಯಂತ ನಿಷೇಧಾಜ್ಞೆ ಜಾರಿಯಾಗಿದ್ದರಿಂದ ಪೊಲೀಸರ ಮನವಿ ಮೇರೆಗೆ ಆಯೋಜಕರು ಪ್ರತಿಭಟನೆಯನ್ನು ವಾಪಸ್ ಪಡೆದರು. ಆದರೆ, ಎಸ್‌ಡಿಪಿಐನ ರಿಯಾಝ್ ಪರಂಗಿಪೇಟೆ ಎಂಬುವವರು ಜಾಲತಾಣಗಳ ಮೂಲಕ ಪ್ರತಿಭಟನೆಗೆ ಕರೆ ನೀಡಿದರು ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಮುಖಕ್ಕೆ ಮುಸುಕು ಹಾಕಿಕೊಂಡಿರುವುದು, ಪೊಲೀಸರ ವಾಹನ ಚಲಿಸದಂತೆ ರಸ್ತೆಯ ಅಡ್ಡಲಾಗಿ ಕಲ್ಲು ಹಾಕಿರುವುದು, ಸಿಸಿ ಕ್ಯಾಮೆರಾ ಒಡೆದು ಹಾಕಿರುವುದೆಲ್ಲವನ್ನು ಗಮನಿಸಿದರೆ, ಮಂಗಳೂರು ಗಲಭೆ ಪೂರ್ವನಿಯೋಜಿತ ಕೃತ್ಯ ಎನ್ನುವುದರಲ್ಲಿ ಅನುಮಾನವಿಲ್ಲವೆಂದು ಅವರು ತಿಳಿಸಿದರು.

**ನ್ಯಾಯಾಂಗ ತನಿಖೆ ಅಗತ್ಯವಿಲ್ಲ:** ಬೆಂಗಳೂರಿನಲ್ಲಿ ಕಾವೇರಿ ವಿಚಾರದಲ್ಲಿ ನಡೆದ ಗೋಲಿಬಾರ್ ಪ್ರಕರಣ, 2007ರಲ್ಲಿ ಮಂಗಳೂರಿನ ಮುಲ್ಕಿಯಲ್ಲಿ ನಡೆದ ಗೋಲಿಬಾರ್ ಪ್ರಕರಣ ಸೇರಿದಂತೆ ಮತ್ತಿತರ ಪ್ರಕರಣಗಳನ್ನು ನ್ಯಾಯಾಂಗ ತನಿಖೆಗೆ ಒಪ್ಪಿಸದೆ, ಮ್ಯಾಜಿಸ್ಟ್ರೇಟ್ ತನಿಖೆಗೆ ಒಪ್ಪಿಸಲಾಗಿತ್ತು. ಅದೇ ಪ್ರಕಾರವಾಗಿ ಈ ಪ್ರಕರಣವನ್ನು ಉಡುಪಿ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಮ್ಯಾಜಿಸ್ಟ್ರೇಟ್ ತನಿಖೆಗೆ ಒಪ್ಪಿಸಲಾಗಿದೆ. ಹೀಗಾಗಲೇ ಹೈಕೋರ್ಟ್ ಪ್ರಕರಣದ ಸಂಬಂಧ ವರದಿ ಕೇಳಿದ್ದು, ಶೀಘ್ರದಲ್ಲಿಯೇ ತನಿಖಾ ವರದಿಯನ್ನು ನ್ಯಾಯಾಲಯಕ್ಕೆ ಒಪ್ಪಿಸಲಾಗುವುದು ಎಂದು ಹೇಳಿದರು.



## ಎಸ್‌ಡಿಪಿಐ ಹಿಂಸಾತ್ಮಕ ಕೃತ್ಯಗಳನ್ನು ನಡೆಸುತ್ತಿವೆ

ಮಂಗಳೂರು ಪ್ರತಿಭಟನೆಯ ವೇಳೆ ಪೊಲೀಸರು ಪ್ರತಿಭಟನಾಕಾರರತ್ತ ಏಕಾಏಕಿ ಗುಂಡು ಹಾರಿಸಿಲ್ಲ. ಮೊದಲಿಗೆ ಲಾಠಿ ಚಾರ್ಜ್, ಬಂಧನ, ಅಶ್ರುವಾಯು 106, ರಬ್ಬರ್ ಬುಲೆಟ್ 47, ಗಾಳಿಯಲ್ಲಿ ಗುಂಡು ಹತ್ತು, ಎಸ್‌ಎಲ್‌ಆರ್ 36 ಗುಂಡುಗಳನ್ನು ಸಿಡಿಸಲಾಯಿತು. ನಂತರವೂ ಪರಿಸ್ಥಿತಿ ನಿಯಂತ್ರಣಕ್ಕೆ ಬಾರದಿದ್ದಾಗ ಅನಿವಾರ್ಯವಾಗಿ ಗುಂಡು ಹಾರಿಸಬೇಕಾಯಿತು. ಡಿ.19ರಂದು ಮಂಗಳೂರಿನಲ್ಲಿ ನಡೆದ ಪ್ರತಿಭಟನೆಯ ಸಂದರ್ಭದಲ್ಲಿ 1,329 ಕರೆಗಳು ಕಾಸರಗೂಡು; ಮಂಗಳೂರು ಮಾರ್ಗದಲ್ಲಿ ದಾಖಲಾಗಿವೆ. ಇದರಲ್ಲಿ ಸುಮಾರು 373 ಮಂದಿಗೆ ನೋಟಿಸ್ ಕಳಿಸಿ ವಿಚಾರಣೆಗೆ ಹಾಜರಾಗುವಂತೆ ಕೇಳಲಾಗಿದೆ. ಇದರಲ್ಲಿ ತಪ್ಪಿತಸ್ಥರೆಂದು ಕಂಡುಬಂದರೆ ಕಾನೂನು ಕ್ರಮ ಜರುಗಿಸಲಾಗುವುದು. ಸಿಎಎ ಹೆಸರಿನಲ್ಲಿ ಎಸ್‌ಡಿಪಿಐ ಹಿಂಸಾತ್ಮಕ ಕೃತ್ಯಗಳನ್ನು ನಡೆಸುತ್ತಿವೆ ಎಂದು ಕೇರಳ ಮುಖ್ಯಮಂತ್ರಿ ಸದನದಲ್ಲಿ ಹೇಳಿದ್ದಾರೆ. ಆ ಪ್ರಕಾರವಾಗಿ ರಾಜ್ಯದ ಕರಾವಳಿ ಪ್ರದೇಶದಲ್ಲಿ ಈ ಸಂಘಟನೆಗಳು ಸಕ್ರಿಯವಾಗಿದೆ. ಇಂತಹ ಸಮಾಜಘಾತಕ ಶಕ್ತಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹಸಚಿವ ಬಸವರಾಜ ಬೊಮ್ಮಾಯಿ ತಿಳಿಸಿದರು.

15